ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಸರ್ಕಾರಿ ಶಾಲೆಗಳ ಶೌಚಾಲಯಗಳಲ್ಲಿ ನೈರ್ಮಲ್ಯದ ಕೊರತೆ ಬಗ್ಗೆ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):-

537(645) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಶಾಲೆಗಳ ಶೌಚಾಲಯಗಳು ಸಮರ್ಪಕ ನಿರ್ವಹಣೆ ಕೊರತೆಯಿಂದ ನೈರ್ಮಲ್ಯ ಶುಚಿತ್ವ ಇಲ್ಲದಿರುವುದು, ನೀರಿನ ಕೊರತೆ, ಕಟ್ಟಡಗಳ ಶಿಥಿಲತೆ ಹಾಗೂ ಇನ್ನಿತರ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಸಮಸ್ಯೆಗಳನ್ನು ತುರ್ತಾಗಿ ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರಗಳನ್ನು ಒದಗಿಸುವುದು)

(ಇ) ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳ ನಿರ್ಮಾಣ ಮತ್ತು ನಿರ್ವಹಣೆ ನಿಟ್ಟಿನಲ್ಲಿ ಖಾಸಗಿ ಸಹಭಾಗಿತ್ವವನ್ನು ಸರ್ಕಾರವು ಪ್ರೋತ್ಸಾಹಿಸುವುದೇ ? (ವಿವರ ಒದಗಿಸುವುದು)